ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ
**Karnataka State Rural Development and Panchayat Raj University**

ರೈತ ಭವನ, ಜನರಲ್‌ಕಾರ್ಯಪ್ಪ ವೃತ್ತ, ಗದಗ– 582 101
RaithaBhavana, General Cariappa Circle, Gadag – 582 101
E-mail: ksrdpruadmissions@gmail.com Phone: 08372-230338, Fax: 08372-297343

---

News about KSRDPR University published in Kannada News Paper

ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ
ಗದಗ ಲೋಕಲ್ ಎಕ್ಸ್‌ಪ್ರೆಸ್
VIJAYAVANI » HUBBALLI
ಭಾನುವಾರ 31 ಜನವರಿ 2021
31 JANUARY 2021
4A

### ಪೂರ್ಣಾವಧಿ ಹುದ್ದೆ ಭರ್ತಿಗೆ ಹಿಂದೇಟು | ವಿದ್ಯಾರ್ಥಿಗಳಿಗಿಲ್ಲ ನೇಮಕಾತಿಯಲ್ಲಿ ಅವಕಾಶ

# ಆರ್‌ಡಿಪಿಆರ್ ವಿವಿಯಲ್ಲಿ ಅರೆಕಾಲಿಕರ ಆಡಳಿತ!

■ ವಿಜಯವಾಣಿ ಸುದ್ದಿಜಾಲ ಗದಗ

ಅರೆಕಾಲಿಕ ಬೋಧಕ, ಬೋಧಕೇತರ ಸಿಬ್ಬಂದಿ ಮೂಲಕವೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ಆರ್‌ಡಿಪಿಆರ್‌ಯು) ಮುನ್ನಡೆಯುತ್ತಿದೆ. ಸರ್ಕಾರದ ಈ ಕ್ರಮಕ್ಕೆ ಜಿಲ್ಲೆಯಲ್ಲಿ ಅಸಮಾಧಾನ ಶುರುವಾಗಿದೆ.

ಗದಗ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ (ಆರ್‌ಡಿಪಿಆರ್‌ಯು) ಕುಲಪತಿ ಒಬ್ಬರನ್ನು ಹೊರತುಪಡಿಸಿ ಬೋಧಕ ಹಾಗೂ ಬೋಧಕೇತರ ಸೇರಿ ಎಲ್ಲರೂ ಅರೆಕಾಲಿಕ ಸಿಬ್ಬಂದಿ.

ಮೂರು ವರ್ಷದ ಹಿಂದೆಯೇ ಈ ವಿಶ್ವವಿದ್ಯಾಲಯ ಆರಂಭಿಸಲಾಗಿದ್ದು, ಇಲ್ಲಿಯವರೆಗೆ ಪೂರ್ಣ ಪ್ರಮಾಣದ ಸಿಬ್ಬಂದಿ ನೇಮಕ ಮಾಡಿಲ್ಲ. ಜತೆಗೆ ಇಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ನೇಮಕಾತಿಯಲ್ಲೂ ಅವಕಾಶ ಇಲ್ಲದಿರುವುದರಿಂದ ದೇಶದ ಮೊಟ್ಟ ಮೊದಲ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದ ಸ್ಥಿತಿ ಡೋಲಾಯಮಾನವಾಗಿದೆ.

**175 ಹುದ್ದೆಗಳು ಮಂಜೂರು:** ಆರ್‌ಡಿಪಿಆರ್ ವಿವಿಯಲ್ಲಿ 175 ಮಂಜೂರಾದ ಹುದ್ದೆಗಳಿವೆ. ಇದರಲ್ಲಿ 53 ಬೋಧಕ ಸಿಬ್ಬಂದಿ (ಎಸ್ಸಿ 8, ಎಸ್ಟಿ 5, ಒಬಿಸಿ 29 ಮತ್ತು ಜಿಎಂ 11), 100 ಬೋಧಕೇತರ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ಇವರೆಲ್ಲರನ್ನೂ ಹೊರಗುತ್ತಿಗೆ ಆಧಾರದಡಿ ನೇಮಕ ಮಾಡಿಕೊಳ್ಳಲಾಗಿದೆ. ಇನ್ನೂ 22 ಹುದ್ದೆ ಖಾಲಿ ಇದ್ದು, ಅವಶ್ಯಕತೆ ಬಿದ್ದರೆ ಉಳಿದ ಹುದ್ದೆಗಳಿಗೂ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ನೇಮಕ ಮಾಡಿಕೊಳ್ಳಲಾಗುವುದು ಎಂದು ಆರ್‌ಡಿಪಿಆರ್ ವಿವಿ ಅಧಿಕಾರಿಗಳು ಹೇಳುತ್ತಾರೆ.

ಆರ್‌ಡಿಪಿಆರ್ ವಿವಿಯಲ್ಲಿ ಸಾರ್ವಜನಿಕ ಆಡಳಿತ, ಅಭಿವೃದ್ಧಿ ಅರ್ಥಶಾಸ್ತ್ರ, ಸಾರ್ವಜನಿಕ ಆರೋಗ್ಯ, ಎಂಎಸ್ಸಿ ಕಂಪ್ಯೂಟರ್ ಸೈನ್ಸ್, ಫುಡ್ ಸೈನ್ಸ್ ಟೆಕ್ನಾಲಜಿ, ಎಂಬಿಎ ರೂರಲ್ ಡೆವಲಪ್‌ಮೆಂಟ್ ಆ್ಯಂಡ್ ಅಗ್ರಿ ಬಿಸಿನೆಸ್ ಮ್ಯಾನೇಜ್‌ಮೆಂಟ್, ಎಂ.ಕಾಂ. ಎಂಟರ್‌ಪ್ರೂನರ್ ಆ್ಯಂಡ್ ಕೋ ಆಪ್ ಮ್ಯಾನೇಜ್‌ಮೆಂಟ್, ಎಂಎ ರೂರಲ್ ಡೆವಲೆಪ್‌ಮೆಂಟ್ ಆ್ಯಂಡ್ ಪಂಚಾಯತ್‌ರಾಜ್ ಸೇರಿ ವಿವಿಧ 10 ಸ್ನಾತಕೋತ್ತರ ಕೋರ್ಸ್‌ಗಳಿವೆ. 3 ಪಿಜಿ ಡಿಪ್ಲೊಮಾ ಕೋರ್ಸ್‌ಗಳಿವೆ. ಸದ್ಯ ಇಲ್ಲಿ 377 ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ಪ್ರತಿ ಕೋರ್ಸ್‌ಗೆ ಒಬ್ಬರನ್ನಾದರೂ ಪೂರ್ಣಾವಧಿ ಪ್ರಾಧ್ಯಾಪಕರನ್ನು ನೇಮಕ ಮಾಡಬೇಕು. ಇಲ್ಲದಿದ್ದರೆ ಅಪಾರ ನಿರೀಕ್ಷೆಯೊಂದಿಗೆ ಆರಂಭಿಸಿರುವ ವಿಶ್ವ ವಿದ್ಯಾಲಯ ಚಿಂತಾಜನಕ ಸ್ಥಿತಿಗೆ ತಲುಪಬಹುದು ಎಂಬ ಆತಂಕ ಇದೆ.



ಗದಗ ನಗರದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ.

## ಸಮಿತಿ ವರದಿ ಆಧರಿಸಿ ಕ್ರಮ

ಗದಗ ನಗರದಲ್ಲಿ ಕಳೆದ ಮೂರು ವರ್ಷದಿಂದ ಆರ್‌ಡಿಪಿಆರ್ ವಿವಿ ಕಾರ್ಯನಿರ್ವಹಿಸುತ್ತಿದ್ದು, ಅಲ್ಲಿ ಬೋಧಕ-ಬೋಧಕೇತರ ಸಿಬ್ಬಂದಿಯನ್ನು ಗುತ್ತಿಗೆ ಆಧಾರದಡಿ ನೇಮಕ ಮಾಡಿಕೊಳ್ಳಲಾಗಿದೆ. ಇಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ನೇಮಕಾತಿಯಲ್ಲಿ ವಿಶೇಷ ಅವಕಾಶ ನೀಡುವ ಕುರಿತು ಉನ್ನತ ಮಟ್ಟದ ಸಮಿತಿ ರಚಿಸಲಾಗಿದೆ. ಸಮಿತಿ ನೀಡುವ ವರದಿ ಆಧರಿಸಿ ಮುಂದಿನ ಕ್ರಮಕೈಗೊಳ್ಳಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ ಕೆ.ಎಸ್. ಈಶ್ವರಪ್ಪ ಅಧಿವೇಶನದಲ್ಲಿ ತಿಳಿಸಿದ್ದಾರೆ.

## ಕಲಿತವರಿಗೆ ಲಾಭವಿಲ್ಲ

ಆರ್‌ಡಿಪಿಆರ್ ವಿವಿಯಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು ಮುಂದಿನ ಭವಿಷ್ಯ ಹೇಗೆ ಎಂದು ಚಿಂತಿತರಾಗಿದ್ದಾರೆ. ಗ್ರಾಮೀಣ ಸೇವೆಗೆ ಸಂಬಂಧಿಸಿದ ಪಿಡಿಒ ಇತ್ಯಾದಿ ಹುದ್ದೆಗಳ ನೇಮಕಾತಿಯಲ್ಲಿ ಆರ್‌ಡಿಪಿಆರ್‌ವಿವಿಯಲ್ಲಿ ಅಧ್ಯಯನ ಮಾಡಿರುವ ವಿದ್ಯಾರ್ಥಿಗಳಿಗೆ ನಿಗದಿತ ಹುದ್ದೆಗಳನ್ನು ಕಾಯ್ದಿರಿಸಬೇಕು. ಅಂದಾಗ ಮಾತ್ರ ಆರ್‌ಡಿಪಿಆರ್ ವಿವಿ ಬೆಳವಣಿಗೆ ಕಾಣಲು ಸಾಧ್ಯವಾಗುತ್ತದೆ. ಇಲ್ಲದಿದ್ದರೆ ನೂರಾರು ಕೋಟಿ ರೂ. ವ್ಯಯಿಸಿ ಆರಂಭಿಸಲಾದ ಆರ್‌ಡಿಪಿಆರ್ ವಿವಿ ಬಿಳಿಯಾನೆಯಂತಾಗುವ ಸಾಧ್ಯತೆ ಇದೆ.

ಗದಗ ಆರ್‌ಡಿಪಿಆರ್ ವಿವಿಯಲ್ಲಿರುವ 10 ಪಿಜಿ ಕೋರ್ಸ್‌ಗಳಿಗೆ ತಲಾ ಒಬ್ಬರಂತೆ ಪೂರ್ಣ ಪ್ರಮಾಣದ ಪ್ರಾಧ್ಯಾಪಕರನ್ನು ನೇಮಿಸಬೇಕು. ಅಲ್ಲದೆ, ಇಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪಿಡಿಒ ಹಾಗೂ ಮತ್ತಿತರ ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸುವ ಹುದ್ದೆಗಳ ಸರ್ಕಾರಿ ನೇಮಕಾತಿಯಲ್ಲಿ ಆದ್ಯತೆ ನೀಡದಿದ್ದರೆ ವಿಶ್ವವಿದ್ಯಾಲಯ ನಡೆಸುವುದು ಕಷ್ಟವಾಗಲಿದೆ. ಇದೇ ಸ್ಥಿತಿ ಮುಂದುವರಿದರೆ ವಿಶ್ವವಿದ್ಯಾಲಯ ಮುಚ್ಚುವ ಹಂತ ತಲುಪಿದರೂ ಅಚ್ಚರಿ ಇಲ್ಲ. ಆದ್ದರಿಂದ ಸರ್ಕಾರ ಕೂಡಲೆ ಪೂರ್ಣಾವಧಿ ಸಿಬ್ಬಂದಿ ನೇಮಿಸಬೇಕು ಹಾಗೂ ಇಲ್ಲಿ ಕಲಿತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ ಮೀಸಲಾತಿ ಕೊಡಬೇಕು.

| ಎಸ್.ವಿ.ಸಂಕನೂರ ವಿಪ ಸದಸ್ಯ ಗದಗ